# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತಾರನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

## ಬುಧವಾರ, ದಿನಾಂಕ:09ನೇ ಮಾರ್ಚ್, 2022

## (ಸಮಯ: ಬೆಳಗ್ಗೆ: 11.00 ಗಂಟೆಗೆ)

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹನ್ನೆರಡನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹನ್ನೆರಡನೆಯ ಪಟ್ಟಿ

## 02. ಚುನಾವಣಾ ಪ್ರಸ್ತಾವ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಮಾನ್ಯ ಸಭಾನಾಯಕರು ಹಾಗೂ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು) ಅವರು:–**

ಕನ್ನಡ ವಿಶ್ವವಿದ್ಯಾಲಯ (ಹಂಪಿ) ಗೌರ್ನಿಂಗ್ ಕೌನ್ಸಿಲ್‌ಗೆ ಸದಸ್ಯರನ್ನು ಚುನಾಯಿಸುವ ಕುರಿತು.

ಕನ್ನಡ ವಿಶ್ವವಿದ್ಯಾಲಯ ಅಧಿನಿಯಮ 1991ರ ಪ್ರಕರಣ 19(ಎನ್)ರ ರೀತ್ಯಾ ಕನ್ನಡ ವಿಶ್ವವಿದ್ಯಾಲಯ (ಹಂಪಿ) ಗೌರ್ನಿಂಗ್ ಕೌನ್ಸಿಲ್‌ಗೆ ವಿಧಾನ ಪರಿಷತ್ತಿನ ಒಬ್ಬರು ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುವುದು.

## 03. ಸದನ ಸಮಿತಿಗಳ ಕಾಲಾವಕಾಶವನ್ನು ವಿಸ್ತರಿಸಲು ಪ್ರಸ್ತಾವ

ಅ) **ಶ್ರೀ ಎನ್. ರವಿಕುಮಾರ್ (ಅಧ್ಯಕ್ಷರು, ವಿಶೇಷ ಸದನ ಸಮಿತಿ) ಅವರು:–**

ರಾಜ್ಯದಲ್ಲಿರುವ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಬರುವ ಕ್ಲಬ್‌ಗಳ ಕಾರ್ಯವೈಖರಿ ಮತ್ತು ಚಟುವಟಿಕೆಗಳನ್ನು ಪರಿಶೀಲಿಸಲು ರಚಿಸಲಾಗಿರುವ ಸದನ ಸಮಿತಿಯು ತನ್ನ ವರದಿಯನ್ನು ಸಲ್ಲಿಸಲು ಇನ್ನೂ ಆರು ತಿಂಗಳು ಕಾಲಾವಕಾಶವನ್ನು ವಿಸ್ತರಿಸುವ ಬಗ್ಗೆ ಪ್ರಸ್ತಾವವನ್ನು ಮಂಡಿಸುವುದು.

ಆ) **ಶ್ರೀ ಎನ್ ರವಿಕುಮಾರ್ (ಅಧ್ಯಕ್ಷರು, ವಿಶೇಷ ಜಂಟಿ ಸದನ ಸಮಿತಿ) ಅವರು:–**

ರಾಜ್ಯದಲ್ಲಿ 2020–21ನೇ ಸಾಲಿನಲ್ಲಿ ಹೊಸದಾಗಿ ನರ್ಸಿಂಗ್ ಮತ್ತು ಅಲೈಡ್ ಹೆಲ್ತ್ ಸೈನ್ಸ್ ಕಾಲೇಜುಗಳಿಗೆ ಮೂಲ ಸೌಕರ್ಯಗಳಿಲ್ಲದಿದ್ದರೂ ಅನುಮತಿ ನೀಡಿ ಇಂಡಿಯನ್ ನರ್ಸಿಂಗ್ ಕೌನ್ಸಿಲ್ ಅವರು ಹೊರಡಿಸಿರುವ ಮಾರ್ಗಸೂಚಿಗಳನ್ನು ಉಲ್ಲಂಘಿಸಿರುವ ವಿಷಯವನ್ನು ಪರಿಶೀಲಿಸಿ ವರದಿಯನ್ನು ನೀಡಲು ರಚಿಸಲಾಗಿರುವ ವಿಶೇಷ ಜಂಟಿ ಸದನ ಸಮಿತಿಯು ತನ್ನ ವರದಿಯನ್ನು ಸಲ್ಲಿಸಲು ಇನ್ನೂ 12 ತಿಂಗಳು ಕಾಲಾವಕಾಶವನ್ನು ವಿಸ್ತರಿಸುವ ಬಗ್ಗೆ ಪ್ರಸ್ತಾವವನ್ನು ಮಂಡಿಸುವುದು.

..2..

ಇ) **ಡಾ. ವೈ.ಎ. ನಾರಾಯಣಸ್ವಾಮಿ (ಅಧ್ಯಕ್ಷರು, ವಿಶೇಷ ಸದನ ಸಮಿತಿ) ಅವರು:-**

ರಾಜ್ಯದ ವಿವಿಧ ನಿಗಮಗಳಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಕೈಗೊಂಡಿರುವ ಕಾಮಗಾರಿಗಳಲ್ಲಿ ನಡೆದಿರುವ ಅವ್ಯವಹಾರಗಳನ್ನು ಪರಿಶೀಲಿಸಲು ರಚಿಸಲಾಗಿರುವ ವಿಶೇಷ ಸದನ ಸಮಿತಿಯು ತನ್ನ ವರದಿಯನ್ನು ಸಲ್ಲಿಸಲು ಇನ್ನೂ ಆರು ತಿಂಗಳು ಕಾಲಾವಕಾಶವನ್ನು ವಿಸ್ತರಿಸುವ ಬಗ್ಗೆ ಪ್ರಸ್ತಾವವನ್ನು ಮಂಡಿಸುವುದು.

## 04. ವಿತ್ತೀಯ ಕಾರ್ಯಕಲಾಪ

2022-23ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಸಾಮಾನ್ಯ ಚರ್ಚೆ

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**